ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : DATE 25/3/2021

# ಸಂದಿಗ್ಧಕ್ಕೆ ಸಿಲುಕಿದ ಬಿಜೆಪಿ ವರಿಷ್ಠರು

## ಉಪ ಸಮರ: ಟಿಕೆಟ್ ಆಕಾಂಕ್ಷಿಗಳ ಪೈಪೋಟಿ ತೀವ್ರ | ಅಭ್ಯರ್ಥಿಗಳ ಪಟ್ಟಿ ನಿಗೂಢ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

**ಬೆಳಗಾವಿ** ಲೋಕಸಭಾ ಕ್ಷೇತ್ರ, ಮಸ್ಕಿ ಹಾಗೂ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗೆ ಬಿಜೆಪಿ ಅಭ್ಯರ್ಥಿಗಳು ಯಾರು ಎಂಬುದು ಇನ್ನೂ ನಿಗೂಢವಾಗಿದೆ. ಪಂಚರಾಜ್ಯಗಳ ಚುನಾವಣಾ ಪ್ರಚಾರ ಕಾರ್ಯದಲ್ಲಿ ವರಿಷ್ಠರು ತೊಡಗಿಕೊಂಡಿದ್ದು, ಪಕ್ಷದ ಕೇಂದ್ರ ಚುನಾವಣಾ ಸಮಿತಿ ಸಭೆ ಸೇರುವುದು ಸಾಧ್ಯವಾಗಿಲ್ಲ. ಆದರೆ ಆಕಾಂಕ್ಷಿಗಳ ತೀವ್ರ ಪೈಪೋಟಿಯು ನವದೆಹಲಿ ನಾಯಕರನ್ನು ಸಂದಿಗ್ಧಕ್ಕೆ ಸಿಲುಕಿಸಿದೆ. ಪ್ರಭಾವಿಗಳು ತೆರೆಮರೆಯ ಲಾಬಿಯು ದೆಹಲಿಯ ಕೆಲವು ನಾಯಕರ ಮೇಲೆ ಒತ್ತಡ ಹೇರಿದ್ದು, ಅಚ್ಚರಿ ಆಯ್ಕೆ ವಿಷಯದಲ್ಲಿ ಹಿಂದೇಟು ಹಾಕುವಂತೆ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಮಸ್ಕಿ ಕ್ಷೇತ್ರಕ್ಕೆ ಪ್ರತಾಪಗೌಡ ಪಾಟೀಲ್ ಹೆಸರು ಅಂತಿಮವಾಗಲಿದೆ. ಬೆಳಗಾವಿ ಲೋಕಸಭೆ ಹಾಗೂ ಬಸವಕಲ್ಯಾಣ ವಿಧಾನಸಭೆ ಕ್ಷೇತ್ರಕ್ಕೆ ಆಕಾಂಕ್ಷಿಗಳ ಸಂಖ್ಯೆ ಡಜನ್ ಲೆಕ್ಕದಲ್ಲಿ ಇದ್ದರೂ ಆಳೆದು ಸುರಿದು ಈ ಸಂಖ್ಯೆಯನ್ನು ತಗ್ಗಿಸಲಾಗಿದೆ.



ಮಸ್ಕಿಯಲ್ಲಿ ಪ್ರತಾಪಗೌಡ ಪಾಟೀಲ್ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು.



ಆರ್.ಬಸನಗೌಡ ತುರ್ವಿಹಾಳ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು.

**ಮೂರು** ಉಪ ಚುನಾವಣೆ ಬಿಜೆಪಿಗೆ ಸವಾಲಾಗಿದೆ. ಪಕ್ಷದ ಕಾರ್ಯಕರ್ತರು ಈ ಸವಾಲನ್ನು ಸಮರ್ಥವಾಗಿ ಎದುರಿಸುತ್ತಾರೆ. ಎಲ್ಲ ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲಲಿದೆ. ಬಸನಗೌಡ ಪಾಟೀಲ ಯತ್ನಾಳ ಬೀದಿ ರಂಪಾಟ ಸರಿಯಲ್ಲ.

| ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯ ಉಪಾಧ್ಯಕ್ಷ

**ಬೆಳಗಾವಿ** ಲೋಕಸಭಾ ಕ್ಷೇತ್ರದ ಉಪ ಚುನಾವಣೆಗೆ ಅಂಗಡಿ ಕುಟುಂಬಕ್ಕೆ ಟಿಕೆಟ್ ನೀಡಲು ಒಂದು ವೇಳೆ ಹೈಕಮಾಂಡ್ ಸಮ್ಮತಿಸಿದರೆ ಸ್ಪರ್ಧಿಸಲು ನಾನು ಸಿದ್ಧಳಿದ್ದೇನೆ.

| ಶ್ರದ್ಧಾ ಶೆಟ್ಟರ್ ಸುರೇಶ್ ಅಂಗಡಿ ಪುತ್ರಿ

**ಬಸವಕಲ್ಯಾಣ** ಕ್ಷೇತ್ರಕ್ಕೆ ಮಾತ್ರ ಅಭ್ಯರ್ಥಿಯನ್ನು ಕಣಕ್ಕಿಳಿಸುತ್ತೇವೆ. ನಮ್ಮ ಸಂಪೂರ್ಣ ಶ್ರಮವನ್ನು ಬಸವಕಲ್ಯಾಣ ಕ್ಷೇತ್ರಕ್ಕೆ ಮೀಸಲಿಡುತ್ತೇವೆ. ಬೆಳಗಾವಿ ಹಾಗೂ ಮಸ್ಕಿ ಕ್ಷೇತ್ರಕ್ಕೆ ಅಭ್ಯರ್ಥಿಗಳನ್ನು ಕಣಕ್ಕಿಳಿಸದಿರಲು ನಿರ್ಧರಿಸಲಾಗಿದೆ.

| ಎಚ್.ಡಿ.ಕುಮಾರಸ್ವಾಮಿ ಮಾಜಿ ಸಿಎಂ

### ಸಿಂದಗಿ ಕಾಂಗ್ರೆಸ್‌ನಲ್ಲಿ ಬಂಡಾಯ

ವಿಜಯಪುರ: ಸಿಂದಗಿ ವಿಧಾನಸಭೆ ಉಪ ಚುನಾವಣೆಗೆ ಮುನ್ನವೇ ಅಭ್ಯರ್ಥಿ ಘೋಷಣೆ ಮಾಡಿರುವ ಕಾಂಗ್ರೆಸ್‌ಗೆ ಬಂಡಾಯದ ಬಿಸಿ ತಟ್ಟಿದೆ. 200ಕ್ಕೂ ಅಧಿಕ ಮುಖಂಡರು ಅಶೋಕ ಮನಗೂಳಿಗೆ ಟಿಕೆಟ್ ನೀಡದಂತೆ ಹಾಗೂ ಮೂಲ ಕಾರ್ಯಕರ್ತರಿಗೆ ಟಿಕೆಟ್ ನೀಡಲು ಆಗ್ರಹಿಸಿದ್ದಾರೆ.

### ಮಸ್ಕಿಯಲ್ಲಿ ನಾಮಪತ್ರ ಸಲ್ಲಿಕೆ

ಮಸ್ಕಿ(ರಾಯಚೂರು): ವಿಧಾನಸಭೆಯ ಉಪ ಚುನಾವಣೆಗಾಗಿ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡ ಪಾಟೀಲ, ಕಾಂಗ್ರೆಸ್ ಅಭ್ಯರ್ಥಿ ಆರ್.ಬಸನಗೌಡ ತುರ್ವಿಹಾಳ ಬುಧವಾರ ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದ್ದಾರೆ.